ಆ) ಅಡಿಕೆ ಬೆಳೆಗಾರ ಹಿತದೃಷ್ಟಿಯಿಂದ ರೈತರು ಬೆಳೆದ ಎಫ್.ಎ.ಕ್ಯೂ. ಗುಣಮಟ್ಟದ ಚಾಲಿ ಪ್ರಭೇಧದ ಅಡಿಕೆಗೆ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿಯಲ್ಲಿ ನಿಗಧಿಪಡಿಸಿರುವ ಬೆಂಬಲ ಬೆಲೆಯಾದ ಪ್ರತೀ ಕ್ವಿಂಟಾಲ್‌ಗೆ ರೂ.6,900/– ಕ್ಕೆ ರಾಜ್ಯ ಸರ್ಕಾರವು ರೂ.600/– ರಂತೆ ಪ್ರೋತ್ಸಾಹ ಧನವನ್ನು ನೀಡುವುದನ್ನು ಸೇರಿಸಿಕೊಂಡು ಬಿಳಿ ಅಡಿಕೆಯನ್ನು ಪ್ರತೀ ಕ್ವಿಂಟಾಲ್‌ಗೆ ರೂ.7,500/–ಗಳಂತೆ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ರೈತರಿಂದ ಖರೀದಿಸಲಾಗುತ್ತಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಚಾಲಿ ಪ್ರಭೇಧದ ಅಡಿಕೆಯ ಮಾದರಿ ಬೆಲೆಯು ಪ್ರತೀ ಕ್ವಿಂಟಾಲ್‌ಗೆ ರೂ.5,000/–ರಿಂದ ರೂ.7,891/–ರವರೆಗೆ ಇದ್ದು ಹೆಚ್ಚಿನ ಮಾರುಕಟ್ಟೆಗಳಲ್ಲಿ ಸರ್ಕಾರವು ಘೋಷಿಸಿದ ಕನಿಷ್ಟ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಯಲ್ಲಿ ಮಾರಾಟವಾಗುತ್ತಿದೆ.

ರೇಷನ್ ಕಾರ್ಡ್‌ಗಳ ವಿತರಣೆಯಲ್ಲಿ ಲೋಪದೋಷ

515 (994) ಶ್ರೀ ಖಾದರ್. ಯು.ಟಿ. (ಮಂಗಳೂರು) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯಾದ್ಯಂತ ನೀಡಿರುವ ರೇಷನ್‌ಕಾರ್ಡ್ (APL & BPL) ಗಳಲ್ಲಿ ಉಂಟಾಗಿರುವ ಲೋಪದೋಷಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಲೋಪದೋಷಗಳನ್ನು ಸರಿಪಡಿಸಲು ಸರ್ಕಾರಕ್ಕೆ ಎಷ್ಟು ಸಮಯ ಬೇಕಾಗುವುದು;

ಇದರಿಂದ ಬಡ ಜನತೆಗೆ ಆಹಾರ ವಿತರಣೆ ಸಮರ್ಪಕವಾಗಿ ದೊರಕಿಸಿಕೊಡಲು ಶೀಘ್ರ ಕ್ರಮ ಕೈಗೊಳ್ಳಲಾಗುವುದೆ?

ಶ್ರೀ ಹೆಚ್.ಹಾಲಪ್ಪ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ಕೆಲವು ಪಡಿತರ ಚೀಟಿಗಳಲ್ಲಿ ಲೋಪದೋಷಗಳಿದ್ದು, ಗಮನಕ್ಕೆ ತಂದಾಗ ಇವುಗಳನ್ನು ಸರಿಪಡಿಸಲು ತಾಲ್ಲೂಕು ಮಟ್ಟದ ಬ್ಯಾಂಕ್ ಆಫೀಸ್ ಗಳನ್ನು ಪ್ರಾರಂಭಿಸಿ ಅವುಗಳಲ್ಲಿ ಪರಿಹಾರ ನೀಡಲಾಗುತ್ತಿದೆ.

ಆ) ಪಡಿತರ ಚೀಟಿದಾರರು ತಮ್ಮ ಪಡಿತರ ಚೀಟಿಯನ್ನು ತಾಲ್ಲೂಕು ಮಟ್ಟದ ಬ್ಯಾಕ್ ಆಫೀಸ್‌ಗಳಲ್ಲಿ ಒದಗಿಸಿ ಅವುಗಳಲ್ಲಿರುವ ಲೋಪದೋಷ ಗಳನ್ನು ಸರಿಪಡಿಸಕೊಳ್ಳಬಹುದು.

ಹೌದು.

ತೋಟಗಾರಿಕೆಯವರು ಹಮ್ಮಿಕೊಂಡಿರುವ ಕಾರ್ಯಕ್ರಮಗಳು

516 (995) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಗೆ ಕಳೆದ 2 ವರ್ಷಗಳಿಂದ ತೋಟಗಾರಿಕಾ ಇಲಾಖೆಗೆ ಬಿಡುಗಡೆ ಮಾಡಲಾದ ಹಣ ಎಷ್ಟು; ವಿವರ ನೀಡುವುದು;

ಆ) ಇಲಾಖೆಯವರು ಜಿಲ್ಲೆಯಲ್ಲಿ ಯಾವ್ಯಾವ ಕಾರ್ಯಕ್ರಮಗಳನ್ನು ಕೈಗೊಂಡಿದ್ದಾರೆ (ಕ್ಷೇತ್ರವಾರು ಮಾಹಿತಿ ನೀಡುವುದು)?

ಶ್ರೀ ಉಮೇಶ್.ವಿ ಕತ್ತಿ (ತೋಟಗಾರಿಕೆ ಮತ್ತು ಬಂಧೀಖಾನೆ ಸಚಿವರು) :

ಅ) ಕಳೆದ 2 ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಗೆ ತೋಟಗಾರಿಕೆ ಇಲಾಖೆಯಿಂದ ಒಟ್ಟು ರೂ.1015.36 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.

ಆ) ಅನುಷ್ಠಾನಗೊಳಿಸಲಾದ ಕಾರ್ಯಕ್ರಮಗಳ ಕ್ಷೇತ್ರವಾರು ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.